ಪೆನ್‌ಡ್ರೈವ್ ಪ್ರಕರಣದ ತನಿಖೆ ನಿಷ್ಪಕ್ಷಪಾತವಾಗಿರಲಿ

ವ್ಯವಸ್ಥೆಯ ಮೇಲೆ ಜನರಿಗೆ ವಿಶ್ವಾಸವಿರಲಿ

ಬಾಗಲಕೋಟೆ: ಹಾಸನ ಪೆನ್ ಡ್ರೈವ್ ವಿಡಿಯೋ ಗಂಭೀರ ಪ್ರಕರಣವಾಗಿದ್ದು, ಜನರು ವ್ಯವಸ್ಥೆಯ ಮೇಲೆ ವಿಶ್ವಾಸ ಕಳೆದುಕೊಳ್ಳಬಾರದು ಎಂಬ ದೃಷ್ಟಿಯಿಂದ ಎಸ್‌ಐಟಿ ತನಿಖೆಗೆ ಒಳಪಡಿಸಿದ್ದೇವೆ. ತನಿಖೆ ನಿಷ್ಪಕ್ಷಪಾತವಾಗಿ ನಡೆಯುತ್ತಿದೆ ಎಂದು

ಸಚಿವ ಕೆ.ಎನ್.ರಾಜಣ್ಣ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್‌ಐಟಿನಲ್ಲಿ ಇಬ್ಬರು ಎಸ್‌ಪಿಗಳಿದ್ದಾರೆ, ಒಬ್ಬರು ಡಿಜಿಪಿ ಇದ್ದಾರೆ. ತನಿಖೆ ನಡೆಸಲು ಏನೆಲ್ಲಾ ಸಹಕಾರ ಬೇಕೋ ಎಲ್ಲವನ್ನೂ ಕೊಡುವುದಕ್ಕೆ ಸರಕಾರ ಸಿದ್ಧವಿದೆ. ತಪ್ಪು ಮಾಡಿದವರು ಬುದ್ಧಿವಂತರಿರುತ್ತಾರೆ. ಅವರು ಪೂರ್ವನಿಯೋಜಿತವಾಗಿ ಎಲ್ಲಿಗೂ ಹೋಗಿರಬಹುದು. ಆದರೆ ಅವರು ಎಲ್ಲೇ ಇದ್ದರೂ ಭೂಮಿ ಮೇಲೆ ಇರಬೇಕಲ್ವಾ?. ಎಂಥೆಂಥವರನ್ನು ದೇಶಕ್ಕೆ ಕರೆತಂದು ಶಿಕ್ಷೆಗೆ ಒಳಪಡಿಸಿದ್ದೇವೆ, ಇದ್ಯಾವ ಲೆಕ್ಕ?. ನಮ್ಮ ಪೊಲೀಸ್ ಅಧಿಕಾರಿಗಳು ಸಶಕ್ತರಿದ್ದಾರೆ. ಪ್ರಜ್ವಲ್ ರೇವಣ್ಣ ಪ್ರಪಂಚದ ಯಾವುದೇ ಮೂಲೆಯಲ್ಲಿದ್ದರೂ ಕರೆತಂದು ಕಾನೂನಿನ ಪ್ರಕ್ರಿಯೆಗೆ ಒಳಪಡಿಸಲು ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.

ಶ್ರೀಕ್ಷೇತ್ರ ಧರ್ಮಸ್ಥಳದಲ್ಲಿ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆ ನೇತೃತ್ವದಲ್ಲಿ ಬುಧವಾರ ನಡೆದ ಉಚಿತ ಸಾಮೂಹಿಕ ವಿವಾಹ ಸಮಾರಂಭದಲ್ಲಿ 123 ವಧು-ವರರು ದಾಂಪತ್ಯ ಜೀವನಕ್ಕೆ ಕಾಲಿಟ್ಟರು.

ವಿವಾದಾತ್ಮಕ ಹೇಳಿಕೆ ಹಿನ್ನೆಲೆ ಯತ್ನಾಳ ಮೇಲೆ ಎಫ್‌ಐಆರ್

ದೂರು ದಾಖಲಿಸಿದ್ದ ಚುನಾವಣಾ ಆಯೋಗ

ಬಾಗಲಕೋಟೆ: ಸಚಿವ ಶಿವಾನಂದ ಪಾಟೀಲ ಅವರ ವಿರುದ್ಧ ವಿವಾದಾತ್ಮಕ ಹೇಳಿಕೆ

ನೀಡಿದ್ದ ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ವಿರುದ್ಧ ಇಲ್ಲಿನ ನವನಗರ ಠಾಣೆಯಲ್ಲಿ ಎಫ್ ಐರ್ ದಾಖಲಾಗಿದೆ. ನವನಗರದ ತೋಟಿವಿ ಪಕ್ಕದಲ್ಲಿ ಈಚೆಗೆ ನಡೆದ ಪ್ರಧಾನಿ ಮೋದಿ ಅವರ ಪ್ರಚಾರ ಕಾರ್ಯಕ್ರಮದಲ್ಲಿ ಶಾಸಕ ಯತ್ನಾಳ ಅವರು, ಪ್ರಧಾನಿ ಪ್ರಚಾರ ಸಮಾವೇಶದಲ್ಲಿ ಸಚಿವ ಶಿವಾನಂದ ಪಾಟೀಲ ಕುಟುಂಬ ರಂಜಾನದಲ್ಲಿ ರೋಜಾ ಮಾಡುತ್ತದೆ ಇಂಥ ಕುಟುಂಬಕ್ಕೆ ಮತ ನೀಡುವ ಬದಲು ಸನಾತನ ಧರ್ಮ ಉಳುವಿಗಾಗಿ ಬಿಜೆಪಿಗೆ ಮತ ನೀಡಿ. ಪಾಟೀಲ ಕುಟುಂಬ ವಿಜಯಪುರದಲ್ಲಿ ಜಾತ್ರೆ ಮುಗಿಸಿದೆ. ಇಲ್ಲಿ ಬಂದರೆ ಬಿವಿವಿ ಸಂಘ, ಡಿಸಿಸಿ ಬ್ಯಾಂಕ್, ಸಕ್ಕರೆ ಕಾರ್ಖಾನೆಗಳು ಉಳಿಯುವುದಿಲ್ಲ ಎಂದು ವಾಗ್ದಾಳಿ ನಡೆಸಿದ್ದರು. ಈ ಬಗ್ಗೆ ಚುನಾವಣಾ ಆಯೋಗದ ಸಿಬ್ಬಂದಿ ನವನಗರ ಠಾಣೆಗೆ ಲಿಖಿತ ದೂರು ನೀಡಿದ್ದರು. ಅದನ್ನು ಆಧರಿಸಿ ಪೊಲೀಸರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ.

ಸಮಾಚಾರ ಸಣ್ಣದಲ್ಲ

ಬರವಿದ್ದರೂ, ಅನುದಾನ ನೀಡದ ಸರಕಾರ

ಬೆಂಗಳೂರು: ರಾಜ್ಯದಲ್ಲಿ ತೀವ್ರ ಬರಗಾಲವಿದ್ದರೂ, ರಾಜ್ಯ ಸರಕಾರ ಬರ ಪರಿಹಾರ ನೀಡಿಲ್ಲ, ಒಂದು ಗೋಶಾಲೆಯನ್ನೂ ಈವರೆಗೆ ತೆರೆದಿಲ್ಲ ಎಂದು ಬಿಜೆಪಿ

ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಟೀಕಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ವಿಪರೀತ ಬರ ಆವರಿಸಿದ್ದರೂ ಬರ ಪರಿಹಾರ ನೀಡಲಿಲ್ಲ, ಒಂದೂ ಗೋಶಾಲೆ ತೆರೆಯಲಿಲ್ಲ, ಮೇವಿನ ಕಿಟ್ ವಿತರಿಸಲಿಲ್ಲ, ರೆತ ದ್ರೋಹಿ ಸರಕಾರಕ್ಕೆ ಶೀಘ್ರವೇ ಜನರಿಂದಲೇ ತಕ್ಕ ಶಾಸ್ತಿಯಾಗಲಿದೆ. ಕಳೆದ ಏಳು ತಿಂಗಳಿಂದಲೂ ಹಾಲಿನ ಪ್ರೋತ್ಸಾಹ ಧನವನ್ನೂ ನೀಡದೇ ರೈತರಿಗೆ ಖಾಲಿ ಬಕೆಟ್ ನೀಡಲು ಹೊರಟಿದ್ದು, ಕಾಂಗ್ರೆಸ್ ಸರಕಾರಕ್ಕೆ ಅನ್ನದಾತರ ಶಾಪ ತಟ್ಟದೇ ಇರಲಾರದು ಎಂದು ಟೀಕಿಸಿದ್ದಾರೆ. ಕುಡಿಯುವ ನೀರಿನ ಟ್ಯಾಂಕರ್ ಮಾಫಿಯಾಗೆ ಕಡಿವಾಣ ಹಾಕುವಲ್ಲಿ ವಿಫಲವಾಗಿರುವ ಕಾಂಗ್ರೆಸ್ ಸರಕಾರ, ಇದೀಗ ತೀವ್ರ ಬರದಿಂದ ಕಂಗೆಟ್ಟು ಸಂಕಷ್ಟದಲ್ಲಿರುವ ನಾಡಿನ ರೈತರೊಂದಿಗೆ ನಿಲ್ಲುವಲ್ಲಿಯೂ ವಿಫಲವಾಗಿದೆ. ಒಲೈಕೆ ರಾಜಕಾರಣಕ್ಕಾಗಿ ದಲಿತರು ಹಾಗೂ ಹಿಂದುಳಿದವರಿಗೆ ಮೀಸಲಿಟ್ಟ ಹಣವನ್ನು ಅನ್ಯ ಕಾರ್ಯಗಳಿಗೆ ಬಳಸಿದ್ದಾಯಿತು. ರೈತರ ಪ್ರೋತ್ಸಾಹ ಧನವು ಮತ್ಯಾವ ಓಲೆಕೆಗೆ ಬಳಕೆಯಾಗಿದೆಯೋ ತಿಳಿಯದು ಎಂದು ವ್ಯಂಗ್ಯವಾಡಿದ್ದಾರೆ.

ನೀರಿನಲ್ಲಿ ಮುಳುಗಿ ಇಬ್ಬರು ಯುವಕರ ಸಾವು

ರಾಯಚೂರು: ಲಿಂಗಸೂರುರು ತಾಲೂಕಿನ ಜಾವೂರ ಕ್ರಾಸ್ ಬಳಿ, ರೋಡಲಬಂಡ ಹತ್ತಿರದ ನಾರಾಯಣಪುರ ಬಲದಂಡೆ ಮುಖ್ಯ ನಾಲೆಗೆ ಬಟ್ಟೆ ತೊಳೆಯಲು ಹೋಗಿದ್ದ ಇಬ್ಬರು ಯುವಕರು ನೀರಲ್ಲಿ ಮುಳುಗಿ ಮೃತಪಟ್ಟಿದ್ದಾರೆ. ಮೃತರನ್ನು ತಾಲೂಕಿನ ಬೆಂಡೋಣಿ ಗ್ರಾಮದ ಲಕ್ಕಪ್ಪ ವಿರುಪಾಕ್ಷಪ್ಪ ಕಮರಿ (25), ಬಸವಂತ ಶರಣಪ್ಪ ಉಪ್ಪಾರ (27) ಎಂದು ಗುರುತಿಸಲಾಗಿದೆ. ಯುವಕರು ಕಾಲುವೆಯಲ್ಲಿ ಮುಳುಗುತ್ತಿದ್ದಂತೆ ಸ್ಥಳೀಯರು ರಕ್ಷಣೆಗೆ ಮುಂದಾಗಿದ್ದಾರೆ. ಕಾಲುವೆಯಿಂದ ಹೊರಗಡೆ ತರುವಷ್ಟರಲ್ಲಿ ಯುವಕರು ಕೊನೆಯುಸಿರು ಎಳೆದಿದ್ದಾರೆ. ಘಟನಾ ಸ್ಥಳಕ್ಕೆ ತಲಪುವಷ್ಟರಲ್ಲಿ ಸ್ಥಳೀಯ ಈಜುಗಾರರು ಯುವಕರ ಮೃತ ದೇಹ ಹೊರಗಡೆ ತಂದಿದ್ದರು ಎಂದು ಅಗ್ನಿ ಶಾಮಕ ಠಾಣಾಧಿಕಾರಿ ಹೊನ್ನಪ್ಪ ದೊಡಮನಿ ತಿಳಿಸಿದರು.

ಮನಃಶಾಂತಿಗಾಗಿ ರೇವಣ್ಣ ಹೋಮ-ಹವನದ ಮೊರೆ

ನನ್ನ ಮಗನ ವಿರುದ್ಧ ಕೇಳಿ ಬರುತ್ತಿರುವ ಆರೋಪಗಳೆಲ್ಲ ಷಡ್ಯಂತ್ರ: ಎಚ್.ಡಿ.ರೇವಣ್ಣ

ಹೊಳೆನರಸೀಪುರ: ಸಂಸದ ಪ್ರಜ್ವಲ್ ವಿರುದ್ಧ ಕೇಳಿ ಬಂದಿರುವ ಪೆನ್‌ಡ್ರೈವ್ ಪ್ರಕರಣದ ತಲೆ ಬಿಸಿಯಲ್ಲಿರುವ ಪ್ರಜ್ವಲ್ ತಂದೆ ಎಚ್.ಡಿ.ರೇವಣ್ಣ ಮನಃಶಾಂತಿಗಾಗಿ ಹೋಮ ಹವನದ ಮೊರೆ ಹೋಗಿದ್ದಾರೆ.

ಹಾಸನ ಜಿಲ್ಲೆಯ ಹೊಳೆನಸೀಪುರದ ತಮ್ಮ ಸ್ವಗೃಹದಲ್ಲಿ ಬುಧವಾರ ಹೋಮ-ಹವನ ಮಾಡಿಸಿ ವಿಶೇಷ ಪೂಜೆ ಸಲ್ಲಿಸಿದರು. ಮನೆಯೊಳಗೇ ಹೋಮ ಕುಂಡ ನಿರ್ಮಿಸಿ ಬೆಳಗ್ಗೆಯಿಂದ ಪೂಜೆ, ಪುನಸ್ಕಾರ, ನೆರವೇರಿಸಿದರು.

ಪೂಜೆ ಮುಗಿಸಿದ ನಂತರ ರೇವಣ್ಣ ಹಾಗೂ ಪತ್ನಿ ಭವಾನಿ ಪ್ರತ್ಯೇಕ ಕಾರಿನಲ್ಲಿ ಬೆಂಗಳೂರಿಗೆ ತೆರಳಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಎಚ್.ಡಿ.ರೇವಣ್ಣ ಅವರು, ಎಸ್‌ಐಟಿ ಅವರು ಮನೆಗೆ ನೋಟೀಸ್ ಅಂಟಿಸಿದ್ದಾರೆ. ಅದರಲ್ಲಿ ಏನಿದೆ ಎಂಬುದನ್ನು ತಿಳಿದುಕೊಳ್ಳುತ್ತೇನೆ. ನಂತರ ಏನು ಮಾಡಬೇಕು ಎಂದು ತೀರ್ಮಾನಿಸಲಾಗುವುದು. ತನಿಖೆಗೆ ಎಲ್ಲಾ ರೀತಿಯಲ್ಲೂ ಸಹಕರಿಸುತ್ತೇವೆ. ನಾನು ಯಾವುದೇ ತಪ್ಪು ಮಾಡಿಲ್ಲ. ಎಲ್ಲ ಸರಿ ಹೋಗಲಿದೆ. ಈ ಎಲ್ಲಾ ಆರೋಪಗಳ ಹಿಂದೆ ದೊಡ್ಡ ಷಡ್ಯಂತ್ರ ಅಡಗಿದೆ. ನಾನು ಯಾವುದೇ ತನಿಖೆ ಎದುರಿಸಲು ಸಿದ್ಧ, ಆ ಶಕ್ತಿ ಇದೆ ಎಂದರು.

ಮನೆಯಲ್ಲಿ ನೀರಸ

ಬುಧವಾರ ತಡ ರಾತ್ರಿ ಬೆಂಗಳೂರಿನಿಂದ ಹೊಳೆನರಸೀಪುರದ ತಮ್ಮ ನಿವಾಸಕ್ಕೆ ಆಗಮಿಸಿದ ಎಚ್.ಡಿ.ರೇವಣ್ಣ ದಂಪತಿ ಪಟ್ಟಣದ ತಮ್ಮ ನಿವಾಸದಲ್ಲೇ ವಾಸ್ತವ್ಯ ಹೂಡಿದ್ದರು. ಬುಧವಾರ ಬೆಳಗ್ಗೆ ಹೋಮ-ಹವನಗಳನ್ನುಮಾಡಿಸಿ ಬೆಂಗಳೂರಿಗೆ ಪ್ರಯಾಣ ಬೆಳೆಸಿದರು. ಮುನ್ನೆಚ್ಚರಿಕೆ ಕ್ರಮವಾಗಿ ರೇವಣ್ಣಾಗೆ ಪೊಲೀಸ್ ಭದ್ರತೆ ಹೆಚ್ಚಿಸಲಾಗಿದೆ. ಪೆನ್‌ಡ್ರೈವ್ ಪ್ರಕರಣ ಬೆಳಕಿಗೆ ಬರುತ್ತಿದ್ದಂತೆ ಮನೆಯಲ್ಲಿದ್ದ ಎಲ್ಲರು ಬೇರೆಡೆ ಹೊರಟು ಹೋಗಿದ್ದಾರೆ. ನಿವಾಸದಲ್ಲೇ ಯಾರು ಇಲ್ಲದ ನೀರಸ ವಾತಾವರಣ ಇದೆ.

ಮಾಜಿ ಸಚಿವ ಎಚ್.ಡಿ.ರೇವಣ್ಣ ಅವರ ಹೊಳೆನರಸೀಪುರದ ನಿವಾಸ.

ಪ್ರಜ್ವಲ್ ವಿಮಾನ ಪ್ರಯಾಣದ ಟಿಕೆಟ್ ಸೀಜ್

ದಾವಣಗೆರೆ: ಸಂಸದ ಪ್ರಜ್ವಲ್ ರೇವಣ್ಣ ಹಾಗೂ ಎಚ್.ಡಿ.ರೇವಣ್ಣ ಮೇಲೆ ಈಗಾಗಲೇ ದೂರು ದಾಖಲಾಗಿದೆ. ರಾಜ್ಯದಲ್ಲಿ ಈ ರೀತಿ ಘಟನೆ ನಡೆದಿದೆ ಎಂದು ತಿಳಿದ ತಕ್ಷಣ ಎಸ್‌ಐಟಿಯಿಂದ ತನಿಖೆ ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸತ್ಯಾಸತ್ಯತೆ ಹೊರ ಬರುವವರೆಗೂ ಹೀಗಂತೆ, ಹಾಗಂತೆ ಎಂದು ಮಾತನಾಡುವುದು ಸರಿಯಲ್ಲ. ತನಿಖಾ ವರದಿಯನ್ನು ಶೀಘ್ರವಾಗಿ ಕೊಡಬೇಕು. ಸರಕಾರ ಈಗಾಗಲೇ ಸೂಚನೆ ಕೊಟ್ಟಿದೆ. ಪ್ರಜ್ವಲ್ ರೇವಣ್ಣ ದೇಶ ಬಿಟ್ಟು ವಿದೇಶಕ್ಕೆ ಹೋಗಿದ್ದಾರೆ ಎಂದು ನಾವು ಅವರ ವಿಮಾನ ಪ್ರಯಾಣದ ಟಿಕೆಟ್ ಸೀಜ್ ಮಾಡಿದ್ದೇವೆ. ಫಾರಂ 41ನಲ್ಲಿ ನೋಟಿಸ್ ನೀಡಲಾಗಿದೆ. 24 ಗಂಟೆಯೊಳಗೆ ತನಿಖೆಗೆ ಹಾಜರಾಗಬೇಕು. ಇಲ್ಲವಾದರೆ ಅವರನ್ನು ಬಂಧಿಸಬೇಕೋ, ಇಲ್ಲವೇ ಬೇರೆ ಕ್ರಮ ಕೈಗೊಳ್ಳಬೇಕೋ ಎನ್ನುವುದು ಎಸ್‌ಐಟಿ ಅಧಿಕಾರಿಗಳ ವಿವೇಚನೆಗೆ ಬಿಟ್ಟದ್ದು. ಪ್ರಕರಣದಲ್ಲಿ ಮುಲಾಜಿಲ್ಲದೆ ಕ್ರಮ ಕೈಗೊಳ್ಳುತ್ತೇವೆ. ಕಾನೂನು ಎಲ್ಲರಿಗೂ ಒಂದೇ ಎಂದರು.

> ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕೆಟ್ಟು ಹೋಗಿದೆ ಎಂದು ಪ್ರಧಾನಿ ಮೋದಿ ಅವರು ಹೇಳಿದ್ದಾರೆ. ನಾನು ಅಂಕಿಅಂಶಗಳನ್ನು ಸದನದಲ್ಲಿ ಬಹಿರಂಗಪಡಿಸುತ್ತೇನೆ. ಅವರ ಆಡಳಿತಾವಧಿಯಲ್ಲಿ ಎಷ್ಟರಮಟ್ಟಿಗೆ ಕಾನೂನು ಸುವ್ಯವಸ್ಥೆ ಇತ್ತು ಎನ್ನುವುದನ್ನು ತಿಳಿಸುತ್ತೇನೆ.
> -ಜಿ.ಪರಮೇಶ್ವರ ಗೃಹ ಸಚಿವ

ಇದೇ ವೇಳೆ ಪ್ರಕರಣದ ಕುರಿತು ಅಮಿತ್ ಶಾ ಹೇಳಿಕೆಗೆ ಪ್ರತಿಕ್ರಿಯಿಸಿ, ಅವರಿಗೆ ಮಾಹಿತಿ ಕೊರತೆ ಇದೆ ಅನ್ನಿಸುತ್ತೆ. ವಿಶೇಷ ತನಿಖಾ ತಂಡ ರಚಿಸಿ ತನಿಖೆ ನಡೆಸಬೇಕು ಎಂದು ಕರ್ನಾಟಕದ ಮಹಿಳಾ ಆಯೋಗಕ್ಕೆ ದೂರು ಬಂದ ನಂತರ ಕ್ರಮ ವಹಿಸಲಾಗಿದೆ.

ಸಂತ್ರಸ್ತರ ಮನೆಗೆ ಹೋಗಿ ಸಾಂತ್ವನ ಹೇಳಿ

ಯಾದಗಿರಿ: ನಾರಿ ಶಕ್ತಿ ಬಗ್ಗೆ ಮಾತನಾಡುವ ಎಚ್.ಡಿ.ಕುಮಾರಸ್ವಾಮಿ ಹಾಗೂ ಬಿಜೆಪಿ ನಾಯಕರಿಗೆ ನಿಜಕ್ಕೂ ಮಹಿಳೆಯರ ಮೇಲೆ ಗೌರವವಿದ್ದರೆ ಮೊದಲು ಸಂತ್ರಸ್ತರ ಮನೆಗೆ ಹೋಗಿ ಆ ಮಹಿಳೆಯರಿಗೆ ಸಾಂತ್ವನ ಹೇಳಿ ಧೈರ್ಯ ತುಂಬಲಿ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಪೆನ್ ಡ್ರೈವ್ ಪ್ರಕರಣದ ಹಿಂದೆ ಮಹಾನಾಯಕರ ಕೈವಾಡವಿದೆ ಎಂಬ ಮಾಜಿ ಸಿಎಂ ಕುಮಾರಸ್ವಾಮಿ ಅವರ ಆರೋಪದ ಕುರಿತು ಪ್ರತಿಕ್ರಿಯಿಸಿದ ಅವರು, ಪೆನ್ ಡ್ರೈವ್ ಬಿಡುಗಡೆ ನಮಗೆ ಅಗತ್ಯವಿಲ್ಲ. ದೇವರಾಜೇ ಗೌಡ ಈ ಪೆನ್ ಡ್ರೈವ್ ವಿಚಾರವಾಗಿ ಯಾರನ್ನೆಲ್ಲಾ ಭೇಟಿ ಮಾಡಿದ್ದರು ಎಂದು ಈಗಾಗಲೇ ನಮ್ಮ ವಕ್ತಾರರು ವಿವರಿಸಿದ್ದಾರೆ. ಈ ವಿಚಾರವಾಗಿ ದೇವರಾಜೇಗೌಡ, ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿದ್ದರು, ಅಲ್ಲದೇ ಬಿಜೆಪಿ ನಾಯಕರಿಗೆ ಈ ವಿಚಾರ ತಿಳಿಸಿದ್ದರು. ನಾವು ಈ ಪೆನ್ ಡ್ರೈವ್ ಬಿಡುಗಡೆ ಮಾಡುವುದಾಗಿದ್ದರೆ ಬೇರೆ ರೀತಿಯೇ ಮಾಡಬಹುದಾಗಿತ್ತು. ನಮಗೆ ಅದರ ಅಗತ್ಯವಿಲ್ಲ. ಈ ವಿಚಾರಗಳ ಬಗ್ಗೆ ನಾನು ಸುಮ್ಮನೆ ಕೂರುವುದಿಲ್ಲ, ಈ ವಿಚಾರವಾಗಿ ಮುಂದೆ ಮಾತನಾಡುವುದಾಗಿ ಹೇಳಿದರು.

ದೇವೆಗೌಡರೇ ಪ್ರಜ್ವಲ್‌ನ ವಿದೇಶಕ್ಕೆ ಕಳುಹಿಸಿರುವರು

ಯಾದಗಿರಿ: ಎಚ್.ಡಿ.ದೇವೇಗೌಡ ಅವರೇ ಪ್ಲಾನ್ ಮಾಡಿ ಸಂಸದ ಪ್ರಜ್ವಲ್ ರೇವಣ್ಣರನ್ನು ವಿದೇಶಕ್ಕೆ ಕಳುಹಿಸಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಜಿಲ್ಲೆಯ ಸುರಪುರ ತಾಲೂಕಿನ ದೇವತ್ಕಲ್‌ನಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಅವರು, ಮಾಜಿ ಪ್ರಧಾನಿ ದೇವೇಗೌಡರ ಕಣ್ಣಿಗೆ ಇದೆಲ್ಲವೂ ಕಾಣಲಿಲ್ಲವಾ, ಪ್ರಜ್ವಲ್ ವಿದೇಶಕ್ಕೆ ಹೋಗುವಾಗ ಯಾರ ಧೈರ್ಯದಿಂದ ಹೋದನು, ಪಾಸ್ ಪೋರ್ಟ್, ವೀಸಾ ಕೊಟ್ಟವರು ಯಾರು? ಇದೆಲ್ಲವನ್ನೂ ಪ್ಲಾನ್ ಮಾಡಿದವರು ದೇವೇಗೌಡರೆ ಎಂದು ದೂರಿದರು. ಇನ್ನೂ ಪೆನ್ ಡ್ರೈವ್ ಪ್ರಕರಣದಲ್ಲಿ ಮಹಾನ್ ನಾಯಕರೊಬ್ಬರ ಕೈವಾಡ ಇದೆ ಎಂದು ಡಿಕೆ ಶಿವಕುಮಾರ್ ಅವರದ್ದ ಪರೋಕ್ಷವಾಗಿ ಕುಮಾರಸ್ವಾಮಿ ಬೊಟ್ಟು ಮಾಡಿರುವ ಆರೋಪಕ್ಕೆ ಪ್ರತಿಕ್ರಿಯಿಸಿ, ಪೆನ್ ಡ್ರೈವ್ನಲ್ಲಿರುವ ವಿಡಿಯೊಗಳು ಲೀಕ್ ಆಗಿದೆ ಅಂತ ಕುಮಾರಸ್ವಾಮಿ ಹೇಳ್ದಾರೆ ಆದರೆ, ರೇವಣ್ಣನ ಕಾರ್ ಡ್ರೈವರ್ ಕಾರ್ತಿಕ್ ಬಿಜೆಪಿಯ ದೇವರಾಜೇಗೌಡರಿಗೆ ಕೊಟ್ಟಿರುವುದಾಗಿ ಹೇಳಿದ್ದಾರೆ .ಡಿಕೆ ಶಿವಕುಮಾರ್ ಪೆನ್ ಡ್ರೈವ್ ಕೊಟ್ಟಿರುವುದಾಗಿ ಹೇಳಿದ್ದಾರಾ? ಡಿಕೆ ಶಿವಕುಮಾರ್ ಅವರಿಗೂ ಈ ಪೆನ್ ಡ್ರೈವ್ ಲೀಕ್ ಆಗಿರುವುದಕ್ಕೂ ಸಂಬಂಧ ಇಲ್ಲ ಎಂದು ಸ್ಪಷ್ಟಪಡಿಸಿದರು.

ಆರೋಪಿ ಕುಟುಂಬಸ್ಥರ ಮೇಲಾದ ಹಲ್ಲೆ ಖಂಡನೆ

ಅಂಬೇಡ್ಕರ್ ಪುತ್ಥಳಿಗೆ ಅಪಮಾನ ಪ್ರಕರಣ | ಕಲಬುರಗಿ-ಜೇವರ್ಗಿ ರಸ್ತೆ ತಡೆದು ಪ್ರತಿಭಟನೆ

ಕಿಡಿಗೇಡಿಗಳ ಮೇಲೆ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಡಿಸಿ ಫೌಜಿಯ ತರನ್ನುಮ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಕಲಬುರಗಿ: ಕೋಟನೂರು (ಡಿ) ಪ್ರದೇಶದ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಅಪಮಾನ ಮಾಡಿದ್ದ ಆರೋಪಿಯೊಬ್ಬರ ಮನೆಗೆ ನುಗ್ಗಿದ ಗುಂಪೊಂದು ಕುಟುಂಬ ಸದಸ್ಯರ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಆರೋಪಿಸಿದ ಕುಟುಂಬಸ್ಥರು ಹಾಗೂ ಅವರ ಬೆಂಬಲಿಗರು ಬುಧವಾರ ಪ್ರತಿಭಟನೆ ನಡೆಸಿದರು.

ಜನವರಿ 23 ರಂದು ಅಂಬೇಡ್ಕರ್ ಪುತ್ಥಳಿಗೆ ಅಪಮಾನ ಮಾಡಿದ ಪ್ರಕರಣದ ಆರೋಪಿ ಸಂಗಮೇಶ ಅವರು ಮಂಗಳವಾರ ಜಾಮೀನಿನ ಮೇಲೆ ಬಿಡುಗಡೆ ಯಾಗಿದ್ದರು. ಇದನ್ನು ತಿಳಿದ ಗುಂಪೊಂದು ಮಂಗಳವಾರ ರಾತ್ರಿ ಸಂಗಮೇಶ ಅವರ ಮನೆಗೆ ನುಗ್ಗಿ, ಕುಟುಂಬ ಸದಸ್ಯರ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಸಂಗಮೇಶ ಸಹೋದರ ಶಿವಕುಮಾರ ಹೇಳಿದರು. ಸಂಗಮೇಶ ಅವರ ಅಣ್ಣನ ಪತ್ನಿ ರಾಜೇಶ್ವರಿ, ತಮ್ಮ ಅನಿಲ್ ಕುಮಾರ್, ಚಿಕ್ಕಪ್ಪ ಮಹಾದೇವಪ್ಪ, ತಾಯಿಯಾದ ತಂಗಮ್ಮ ಅವರು ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಮನೆಯ ಸಮೀಪ ನಿಲ್ಲಿಸಿದ್ದ ಒಂದು ಕಾರು, ನಾಲ್ಕು ಬೈಕ್‌ಗಳಿಗೆ ಹಾನಿಯಾಗಿದೆ. ಇದುವರೆಗೂ ಪ್ರಕರಣ ದಾಖಲಿಸಿಕೊಂಡಿಲ್ಲ ಎಂದು ಆರೋಪಿಸಿದರು.

ಪುತ್ಥಳಿಗೆ ಅಪಮಾನ ಪ್ರಕರಣದಲ್ಲಿ ನನ್ನ ಪತಿ ಬಂಧಿತನಾಗಿ ವಿಚಾರಣೆ ಎದುರಿಸುತ್ತಿದ್ದಾರೆ. ಅವರು ತಪ್ಪು ಮಾಡಿದ್ದು ಸಾಬೀತಾದರೆ ಕಾನೂನಿನ ಅನ್ವಯ ಶಿಕ್ಷೆಯಾಗಲಿ ನಮ್ಮದು ಯಾವುದೇ ತಕರಾರು ಇಲ್ಲ, ಆದರೆ, ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಕ್ಕೆ ಕುಟುಂಬ ಸದಸ್ಯರ ಮೇಲೆ ಹಲ್ಲೆ ಮಾಡುವುದು ಎಷ್ಟು ಸರಿ? ಇದು ಯಾವ ನ್ಯಾಯ? ಮನೆಗೆ ನುಗ್ಗಿ ಹೊಡೆದಿದ್ದಾರೆ. ರಕ್ಷಣೆಗೆ ಪೊಲೀಸರು ಬರಲಿಲ್ಲ ಎಂದು ಸಂಗಮೇಶ ಪತ್ನಿ ಪ್ರಿಯಾಂಕಾ ಹೇಳಿದರು.

ಜಿಲ್ಲಾಧಿಕಾರಿ ಬರುವವರೆಗೂ ಪ್ರತಿಭಟನೆಯಿಂದೆ ಸರಿಯುವುದಿಲ್ಲ ಎಂದು ನೂರಾರು ಪ್ರತಿಭಟನಾಕಾರರು ಕಲಬುರಗಿ-ಜೇವರ್ಗಿ ರಸ್ತೆ ತಡೆದರು. ಇದರಿಂದ ಎರಡೂ ಕಡೆ ನೂರಾರು ವಾಹನಗಳು ಸಾಲುಗಟ್ಟಿ ನಿಂತಿವೆ. ಟೈರ್‌ಗೆ ಬೆಂಕಿ ಹಚ್ಚಿದ್ದಾರೆ